## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 425 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಪಡಿತರ ಚೀಟಿ ಅರ್ಜಿಗಳನ್ನು ಕಾಲಕಾಲಕ್ಕೆ ಪ್ರಮಾಣೀಕೃತ ಮಾನದಂಡಗಳ ಆಧಾರದಲ್ಲಿ ಪರಿಶೀಲನೆ, ಪರಿಷ್ಕರಣೆ ಮತ್ತು ವಿಲೇವಾರಿ ಮಾಡದೆ ಕಳೆದ ಎರಡು ವರ್ಷಗಳಿಂದ ಬಾಕಿಯಿರುವ ಬಗ್ಗೆ ಸರ್ಕಾರ ಯಾವ ರೀತಿಯಲ್ಲಿ ಕ್ರಮವಹಿಸಲಾಗುತ್ತಿದೆ; | ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಮಾರ್ಚ್ 2023ರ ವರೆಗೆ ಸಲ್ಲಿಕೆಯಾಗಿರುವ 2,95,986 ಅರ್ಜಿಗಳ ವಿಲೇವಾರಿ ಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್ಎ 2021, ದಿನಾಂಕ: 29.09.2023 ರಲ್ಲಿ ಆದೇಶಿಸಲಾಗಿದ್ದು ಅದರಂತೆ ಕ್ರಮವಹಿಸಲಾಗಿರುತ್ತದೆ.<br>• ಬಾಕಿ ಇರುವ ಅರ್ಜಿಗಳನ್ನು ಪರಿಶೀಲಿಸಿ, ಈಗಾಗಲೇ 2,04,760 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿರುತ್ತದೆ.<br>• ತುರ್ತು ವೈದ್ಯಕೀಯ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಅರ್ಹರಿಗೆ ಆದ್ಯತಾ ಪಡಿತರ ಚೀಟಿ ನೀಡಲು ಹಾಗೂ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ.<br>• ಇ-ಶ್ರಮ್ ನೊಂದಾಯಿತ ಕಾರ್ಮಿಕರಿಗೆ ಹಾಗೂ ಬುಡಕಟ್ಟು ಜನಾಂಗದವರಿಗೆ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಆ | ಅತೀ ಅಗತ್ಯವಿರುವ ನಾಗರಿಕರಿಗೆ ಮಾತ್ರ ಮನವಿಯ ಆಧಾರದಲ್ಲಿ ಪಡಿತರ ಚೀಟಿ ನೀಡುವ ಬದಲು ಖಚಿತ ಆದಾಯ ಮೂಲ ಹೊಂದಿ, ಅದಕ್ಕೆ ಪೂರಕವಾಗಿ ಆರ್ಥಿಕ ವ್ಯವಹಾರ, ತೆರಿಗೆ ಪಾವತಿ, ಸ್ವಂತ ವಾಹನ, ಕೃಷಿ, ಮತ್ತು ಇವುಗಳನ್ನು ಸ್ಪಷ್ಟವಾಗಿ ಗುರುತಿಸುವ ಆಧಾರ್, ಪಾನ್, ಪಹಣಿ, ತೆರಿಗೆ ಪಾವತಿ ದಾಖಲೆಗಳು, ಬ್ಯಾಂಕ್ ವಹಿವಾಟು ಇತ್ಯಾದಿಗಳ ಲಿಂಕ್ ಮೂಲಕ ಪ್ರಾರಂಭದಲ್ಲೇ ಬಿಪಿಎಲ್ ಪಡಿತರ ಚೀಟಿಯ ವ್ಯಾಪ್ತಿಯಿಂದ ಹೊರಗಿಟ್ಟು ಉಳಿದವರಿಗೆ ಎಪಿಎಲ್ ಪಡಿತರ ಚೀಟಿ ನೀಡಲು ಇರುವ ಸಮಸ್ಯೆಗಳೇನು; | ಆದ್ಯತೇತರ ಪಡಿತರ ಚೀಟಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |

| | | |
|---|---|---|
| ಇ | ಕರ್ನಾಟಕ ರಾಜ್ಯದಲ್ಲಿ ಇನ್ನು ಎಷ್ಟು ಕುಟುಂಬಗಳಿಗೆ ಪಡಿತರಚೀಟಿ ನೀಡಲು ಬಾಕಿಯಿದೆ; ಈ ಕುರಿತು ಮಾಹಿತಿ ಸರ್ಕಾರದ ಬಳಿ ಇದೆಯೇ; ಈ ಕುರಿತಂತೆ ಯಾವುದಾದರೂ ಸಮೀಕ್ಷೆ ನಡೆಸಿದೆಯೇ; ಅಥವಾ ಈ ಬಗ್ಗೆ ಕೈಗೊಳ್ಳಲುದ್ದೇಶಿಸಿರುವ ಕ್ರಮಗಳೇನು; (ವಿವರ ನೀಡುವುದು) | ಕರ್ನಾಟಕ ರಾಜ್ಯದಲ್ಲಿ **1,66,486** ಆದ್ಯತಾ ಪಡಿತರ ಚೀಟಿಗಳು ಹಾಗೂ **1,06,880** ಆದ್ಯತೇತರ ಪಡಿತರ ಚೀಟಿಗಾಗಿ ಸಲ್ಲಿಸಿರುವ ಅರ್ಜಿಗಳು ಪರಿಶೀಲನೆಗೆ ಬಾಕಿ ಇರುತ್ತವೆ. ಈ ಕುರಿತಂತೆ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. |
| ಈ | ಏಕ ಬಾರಿಗೆ (ಒನ್‌ಟೈಮ್ ಸೆಟ್ಲಮೆಂಟ್ ಮೂಲಕ) ಆಹಾರ ಇಲಾಖೆಯು ಅರ್ಜಿದಾರರ ಆದಾಯ/ವ್ಯವಹಾರಕ್ಕೆ ಲಿಂಕ್ ಆಗಿರುವ ವೈಯುಕ್ತಿಕ ದಾಖಲೆಗಳನ್ನು ಹೊಂದಿರುವ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಈಗ ಬಾಕಿಯಾಗಿರುವ ಎಲ್ಲಾ ಪಡಿತರ ಚೀಟಿ ಅರ್ಜಿಗಳನ್ನು ಕ್ಷಿಪ್ರವಾಗಿ ವಿಲೇವಾರಿ ಮಾಡುವ ಬಗ್ಗೆ ಸರಕಾರ ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಆದೇಶ ಸಂಖ್ಯೆ ಆನಾಸ **116** ಡಿಆರ್‌ಎ **2015**, ದಿನಾಂಕ: **25.03.2017** ರಲ್ಲಿ ಸರ್ಕಾರವು ಈ ಕೆಳಕಂಡ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು /ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ **1000** ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. **1.20** ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |

| | | |
|---|---|---|
| | | ಮೇಲಿನ ಮಾರ್ಗಸೂಚಿಗಳನ್ವಯ ಗುರುತಿಸಲಾದ ಆದ್ಯತೇತರ ಕುಟುಂಬಗಳನ್ನು ಹೊರತುಪಡಿಸಿ ಉಳಿದ ಕುಟುಂಬಗಳಿಗೆ ಪಡಿತರ ಚೀಟಿ ಅರ್ಜಿಗಳನ್ನು ವಿಲೇವಾರಿ ಮಾಡಲು ಕ್ರಮಕೈಗೊಳ್ಳಲಾಗುತ್ತಿರುತ್ತದೆ.<br>ಆದಾಯ/ವ್ಯವಹಾರಕ್ಕೆ ಲಿಂಕ್ ಆಗಿರುವ ವೈಯಕ್ತಿಕ ದಾಖಲೆಗಳನ್ನು ಹೊಂದಿರುವ ಕಂದಾಯ ಇಲಾಖೆ, ಆದಾಯ ತೆರಿಗೆ ಇಲಾಖೆ ಮತ್ತು ಇ-ಆಡಳಿತ ಇಲಾಖೆಗಳೊಡನೆ ಸಮನ್ವಯ ಸಾಧಿಸಿ ಅವರಿಂದ ಪಡೆದ ಮಾಹಿತಿಯನ್ನು ಪರಿಶೀಲಿಸಿ ಕ್ರಮವಹಿಸಲಾಗುತ್ತಿರುತ್ತದೆ. |

ಇ-ಆನಾಸ 73 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು